## ಕರ್ನಾಟಕ ವಿಧಾನಪರಿಷತ್

1 ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **459**

2 ಸದಸ್ಯರ ಹೆಸರು : ಶ್ರೀ ಟಿ. ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು)

3 ಉತ್ತರಿಸುವ ದಿನಾಂಕ : 22.12.2022

4 ಉತ್ತರಿಸುವ ಸಚಿವರು : ಮಾನ್ಯ ತೋಟಗಾರಿಕೆ ಹಾಗೂ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು.

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದ ಹಲವು ಪ್ರದೇಶಾಭಿವೃದ್ಧಿ ಮಂಡಳಿಗಳಿಗೆ ಸದಸ್ಯರಾಗಲು ವಿಧಾನ ಸಭೆ ಸದಸ್ಯರು ಹಾಗೂ ವಿಧಾನ ಪರಿಷತ್ತು ಸದಸ್ಯರಿಗೆ ಕಾನೂನು ಬದ್ಧ ಅವಕಾಶ ಇದ್ದರು ಸಹ ವಿಧಾನ ಸಭೆಯಿಂದ ಮೇಲ್ಮನೆಗೆ ಆಯ್ಕೆಯಾಗುವ ಸದಸ್ಯರುಗಳು ಮಾತ್ರ ಈ ಹಕ್ಕಿನಿಂದ ವಂಚಿತರಾಗಿರುವುದಕ್ಕೆ ಕಾರಣಗಳೇನು: | ರಾಜ್ಯದ ವಿಧಾನಸಭೆ ಹಾಗೂ ವಿಧಾನ ಪರಿಷತ್ ಸದಸ್ಯರುಗಳು ಅವರು ಆಯ್ಕೆ ಮಾಡಿಕೊಂಡ ನೋಡಲ್ ಜಿಲ್ಲೆ/ ತಾಲ್ಲೂಕುಗಳು ಮಂಡಳಿ ವ್ಯಾಪ್ತಿಗೆ ಬರುತ್ತಿದ್ದರೆ, ಆ ಮಂಡಳಿಗಳಿಗೆ ಮಾನ್ಯ ಶಾಸಕರುಗಳು ಸದಸ್ಯರುಗಳಾಗಿರುತ್ತಾರೆ. ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿ ಹಾಗೂ ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿ ಕಾಯ್ದೆಯಲ್ಲಿ ಶಾಸಕರಿಂದ ಚುನಾಯಿತರಾದ ವಿಧಾನ ಪರಿಷತ್ ಸದಸ್ಯರುಗಳನ್ನು ಮಂಡಳಿಯ ಸದಸ್ಯರುಗಳಾಗಿ ಪರಿಗಣಿಸಲು ಅವಕಾಶ ಕಲ್ಪಿಸಿರುವುದಿಲ್ಲ. ಆದ್ದರಿಂದ ಪ್ರಸ್ತುತ ಅವಕಾಶ ಕಲ್ಪಿಸಲು ಕಾಯ್ದೆಗೆ ತಿದ್ದುಪಡಿ ತರಲು ಕ್ರಮವಹಿಸಲಾಗಿದೆ. |
| (ಆ) | ತಮ್ಮ ಕ್ಷೇತ್ರಗಳನ್ನು ಘೋಷಿಸಿಕೊಂಡರೂ ಅವರಿಗೆ ಮಂಡಳಿಯಲ್ಲಿ ಸ್ಥಾನ ಕಲ್ಪಿಸಲು ಕಾಯ್ದೆಯಲ್ಲಿ ಅವಕಾಶ ಇಲ್ಲವಾಗಿದ್ದು, ಕಾಯ್ದೆಗೆ ತಿದ್ದುಪಡಿ ತರಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು: | ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿ ಮತ್ತು ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿಗಳ ಕಾಯ್ದೆಗಳಿಗೆ ತಿದ್ದುಪಡಿ ತಂದು ಶಾಸಕರಿಂದ ಆಯ್ಕೆಯಾದ ವಿಧಾನ ಪರಿಷತ್ ಸದಸ್ಯರುಗಳನ್ನು ಅವರು ನೋಡಲ್ ಜಿಲ್ಲೆ/ತಾಲ್ಲೂಕುಗಳಾಗಿ ಆಯ್ಕೆ ಮಾಡಿಕೊಂಡ ಪ್ರದೇಶ ವ್ಯಾಪ್ತಿಯು, ಯಾವ ಮಂಡಳಿಗೆ ಸೇರ್ಪಡೆಗೊಳ್ಳುತ್ತದೆಯೋ ಆ ಮಂಡಳಿಯ ಸದಸ್ಯರನ್ನಾಗಿ ಪರಿಗಣಿಸಲು ಕಾಯ್ದೆಗೆ ತಿದ್ದುಪಡಿ ತರಲು ಪ್ರಸ್ತಾವನೆ ಸಿದ್ಧಪಡಿಸಿ ಕಡತ ಸಂಖ್ಯೆ:ಪಿಡಿಎಸ್ 15 ಮಪ್ರಮಂ 2019 ಮತ್ತು ಪಿಡಿಎಸ್ 78 ಪಿಟಿಪಿ 2018 ದಿನಾಂಕ:06.11.2021 ರಲ್ಲಿ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆಗೆ ಸಲ್ಲಿಸಲಾಗಿದೆ. |
| (ಇ) | ಕಾಯ್ದೆಗೆ ತಿದ್ದುಪಡಿ ತಂದು ಹಕ್ಕುಗಳನ್ನು ನೀಡುವ ಪ್ರಸ್ತಾವನೆಯು ಸರ್ಕಾರದ ಹಂತದಲ್ಲಿದ್ದು ಅದನ್ನು ವಿಧಾನ ಸಭೆಯಲ್ಲಿ ಮಂಡಿಸದಿರುವ ಕಾರಣವೇನು; ಕಾಯ್ದೆಗೆ ತಿದ್ದುಪಡಿ ತಂದು ವಿಧಾನ ಸಭೆಯಿಂದ ಆಯ್ಕೆಯಾಗುವ ಮೇಲ್ಮನೆ ಸದಸ್ಯರಿಗೆ ನ್ಯಾಯ ದೊರಕಿಸಿ ಕೊಡಲು ಸರ್ಕಾರ ಕೈಗೊಂಡ ಕ್ರಮಗಳೇನು? | ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿ ಮತ್ತು ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿಗಳ ಕಾಯ್ದೆಗೆ ತಿದ್ದುಪಡಿ ತಂದು ವಿಧಾನಸಭೆಯಲ್ಲಿ ಮಂಡಿಸುವ ಸಲುವಾಗಿ ಯೋಜನಾ ಇಲಾಖೆಯು ಈಗಾಗಲೇ ಪ್ರಸ್ತಾವನೆ ಸಿದ್ಧಪಡಿಸಿ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆಗೆ ಸಲ್ಲಿಸಲಾಗಿದೆ. ಈ ಕುರಿತು ಸಂಸದೀಯ ವ್ಯವಹಾರಗಳ ಸಚಿವರ ಅಧ್ಯಕ್ಷತೆಯಲ್ಲಿ ಹಲವು ಸುತ್ತಿನ ಸಭೆಗಳು ನಡೆದಿದ್ದು, ವಿಧಾನ ಮಂಡಲದಲ್ಲೂ ಮಂಡಿಸುವ ಪ್ರಕ್ರಿಯೆಯನ್ನು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ ಕೈಗೊಳ್ಳಬೇಕಾಗಿರುತ್ತದೆ. |

ಸಂಖ್ಯೆ: ಪಿಡಿಎಸ್ 46 ಎಂಡಿಬಿ 2022

(ಮುನಿರತ್ನ)
ಸಚಿವರು
ತೋಟಗಾರಿಕೆ ಹಾಗೂ ಯೋಜನೆ,
ಕಾರ್ಯಕ್ರಮ ಸಂಯೋಜನೆ ಮತ್ತು
ಸಾಂಖ್ಯಿಕ ಇಲಾಖೆ